# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಹೊಂಬೇಗೌಡನಗರ ಉಪವಿಭಾಗ,**
**ಬೃ.ಬೆಂ.ಮ.ಪಾಲಿಕೆ 7ನೇ ಅಡ್ಡರಸ್ತೆ, 7ನೇ ಮುಖ್ಯರಸ್ತೆ, ಜಯನಗರ 2ನೇ ಬ್ಲಾಕ್ ಬೆಂಗಳೂರು**

ಸಂಖ್ಯೆ:ಸ.ಇಂ/ವಾ-153/ವಾರ್ಡ್ ಸಭೆ/2020-21 ದಿನಾಂಕ:09/11/2020

## ವಾರ್ಡ್ -153ರ ವಾರ್ಡ್ ಸಭೆಯ ನಡವಳಿ

ದಿನಾಂಕ:09/11/2020 ರಂದು ಹೊಂಬೇಗೌಡನಗರ ಉಪವಿಭಾಗ ವಾರ್ಡ್-153ರ ವಾರ್ಡ್ ಕಛೇರಿಯಲ್ಲಿ ಶ್ರೀಮತಿ. ವರಲಕ್ಷ್ಮಿ ಸಹಾಯಕ ಆಯುಕ್ತರು, (ಆಡಳಿತ) ದಕ್ಷಿಣ ವಲಯ ವಾರ್ಡ್ 153ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

| ಕ್ರಮ ಸಂಖ್ಯೆ | ಅಧಿಕಾರಿಯವರ ಹೆಸರು | ಪದನಾಮ/ಇಲಾಖೆ | ಹಾಜರಾತಿ |
|---|---|---|---|
| 1 | ಶ್ರೀ. ವರಲಕ್ಷ್ಮಿ | ಸಹಾಯಕ ಆಯುಕ್ತರು (ಆಡಳಿತ) ದಕ್ಷಿಣ ವಲಯ | ಹಾಜರಿದ್ದರು |
| 2 | ಶ್ರೀ. ನರಸಿಂಹಯ್ಯ ಎಸ್. | ಕಿರಿಯ ಅಭಿಯಂತರರು ವಾರ್ಡ್-153-ಜಯನಗರ | ಹಾಜರಿದ್ದರು |
| 3 | ಶ್ರೀ. ರೇಣುಕಯ್ಯ | ಮೌಲ್ಯಮಾಪಕರು ವಾರ್ಡ್-153 | ಹಾಜರಿದ್ದರು |
| 4 | ಶ್ರೀ. ಎಂ. ಕೃಷ್ಣಮೂರ್ತಿ | ಕಂದಾಯ ವಸೂಲಿಗಾರರು ಹೊಂಬೇಗೌಡನಗರ ಉಪವಿಭಾಗ | ಹಾಜರಿದ್ದರು |
| 5 | ಶ್ರೀ. ರವೀಂದ್ರ ಇಜೇರಿ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿದ್ದರು |
| 6 | ಶ್ರೀ. ವಿದ್ಯಾಧರ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-~~144~~ 153 | ಹಾಜರಿದ್ದರು |
| 7 | ಶ್ರೀ. ಮೂರ್ತಿ | ಕಿರಿಯ ಅಭಿಯಂತರರು ಬೆಸ್ಕಾಂ ಇಲಾಖೆ | ಹಾಜರಿದ್ದರು |
| 8 | ಶ್ರೀಮತಿ. ಜ್ಯೋತಿ ಕೋಟ್ | ಸಬ್ ಇನ್ಸ್‌ಪೆಕ್ಟರ್ ಬಸವನಗುಡಿ ಪೊಲೀಸ್ ಠಾಣೆ | ಹಾಜರಿದ್ದರು |
| 9 | ಶ್ರೀ. ಕೆಂಪರಾಜು | ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್ ಸಿದ್ದಾಪುರ ಪೊಲೀಸ್ ಠಾಣೆ | ಹಾಜರಿದ್ದರು |
| 10 | ಶ್ರೀಮತಿ. ಶಿಲ್ಪಾ ಕಾಂಬ್ಳೆ | ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸಿದ್ದಾಪುರ ಪೊಲೀಸ್ ಠಾಣೆ | ಹಾಜರಿದ್ದರು |
| 11 | ಶ್ರೀ. ಶಿವಲಿಂಗಯ್ಯ ಡಿ. | ತಿಲಕ್‌ನಗರ ಪೊಲೀಸ್ | ಹಾಜರಿದ್ದರು |
| 12 | ಶ್ರೀ. ಜಿ.ಟಿ. ಬೊಮ್ಮೇಗೌಡ | ಕೆಲಸ ಪರಿವೀಕ್ಷಕರು Ward-153 | ಹಾಜರಿದ್ದರು |

ಮ.ಪು.ನೋ.



Scanned with CamScanner

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ. ಲಕ್ಷ್ಮೀಶ | ಸದಸ್ಯರು | ಹಾಜರಿದ್ದರು |
| 2 | ಶ್ರೀ. ಭೀಮಪ್ಪ | ಸದಸ್ಯರು | ಹಾಜರಿದ್ದರು |
| 3 | ಡಾ॥ ಪ್ರಕಾಶ್ | ಸದಸ್ಯರು | ಹಾಜರಿದ್ದರು |
| 4 | ಶ್ರೀಮತಿ. ಪ್ರಮೀಳಾ | ಸದಸ್ಯರು | ಹಾಜರಿದ್ದರು |
| 5 | ಶ್ರೀಮತಿ. ಶಾನ್ ಅಹಮದ್ | ಸದಸ್ಯರು | ಹಾಜರಿದ್ದರು |

| ಕ್ರಮ ಸಂಖ್ಯೆ | ಸ್ಥಳೀಯರ ಹೆಸರು | ವಿವರ | ಹಾಜರಾತಿ |
|---|---|---|---|
| 1 | ಡಾ॥ ರಾಜ್ ಎಂ.ಡಿ ಫರಜ್ ಕುರೇಷಿ | ಸ್ಥಳೀಯರು | ಹಾಜರಿದ್ದರು |
| 2 | ಶ್ರೀಮತಿ. ಸನ್ನಾ ತಾಜ್ | ಸ್ಥಳೀಯರು | ಹಾಜರಿದ್ದರು |
| 3 | ಶ್ರೀ. ಹಯಾಜ್ | ಸ್ಥಳೀಯರು | ಹಾಜರಿದ್ದರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ನಿಗಧಿತ ಸಮಯಕ್ಕೆ ಪ್ರಾರಂಭಿಸಲಾಯಿತು.

1. **ವಾರ್ಡಿನಲ್ಲಿ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ:-** ಸಭೆಯ ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ. ವರಲಕ್ಷ್ಮಿ, ಸಹಾಯಕ ಆಯುಕ್ತರು (ಆಡಳಿತ) ರವರು ಮಾತನಾಡಿ ಹಿಂದಿನ ಸಭೆಯಲ್ಲಿ ಚರ್ಚಿಸಲಾಗ ವಿಷಯಗಳ ಬಗ್ಗೆ ವಿಚಾರಿಸಿ ಮಾಹಿತಿಗಳನ್ನು ಪಡೆದುಕೊಂಡರು.

ವಾರ್ಡಿನ ಸದಸ್ಯರಾದ ಶ್ರೀಮತಿ. ಪ್ರಮೀಳಾ ರವರು 8ನೇ ಮುಖ್ಯರಸ್ತೆ, ಸೋಮೇಶ್ವರನಗರ ಇಲ್ಲಿ ವಾರ್ಡ್-144ರಿಂದ ಹೆಚ್ಚು ಕಸ ತಂದು ಹಾಕುತ್ತಿರುವುದಾಗಿ ಹಾಗೂ ವಾರ್ಡಿನಲ್ಲಿ ಸೊಳ್ಳೆ ಔಷದಿ ಸಿಂಪಡಿಸುವ ಗ್ಗೆ ತಿಳಿಸಿದರು ಈ ಬಗ್ಗೆ ಘನತ್ಯಾಜ್ಯ ವಿಭಾಗದ ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ಪ್ರತಿಕ್ರಿಯಿಸಿ ಈ ಬಗ್ಗೆ ಅತಿ ಜರೂರಾಗಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಮು.ತಿ.ನೋ..



Scanned with CamScanner

ವಾರ್ಡಿನ ಸ್ಥಳೀಯರಾದ ಶ್ರೀ. ಹಯಾಜ್ ರವರು ಮಾತನಾಡಿ 4ನೇ ಅಡ್ಡರಸ್ತೆ, ಆರ್.ಬಿ.ಐ ಕಾಲೋನಿ ಟ್ರಾನ್ಸ್‌ಫಾರ್ಮರ್ ಹತ್ತಿರ ಕಸ ಹಾಗೂ ಡೆಬ್ರಿಸ್ ಹಾಕುತ್ತಿರುವುದಾಗಿ ದೂರಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರು ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

2. <u>**ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**</u> ವಾರ್ಡಿನ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಈ ಕೆಳಕಂಡ ಕೋವಿಡ್ ಪರೀಕ್ಷೆಯ ಪ್ರಸ್ತುತ ವಿವರಗಳನ್ನು ಸಭೆಗೆ ನೀಡಿದರು ಹಾಗೂ ಸಭೆಯಲ್ಲಿ ಹಾಜರಿದ್ದ ವಾರ್ಡಿನ ಆರೋಗ್ಯ ವೈದ್ಯರು ಡಾ॥ ಸಹನಾ ರವರಿಗೆ ರವರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೋವಿಡ್ ಕೇಸ್‌ಗಳ ಬಗ್ಗೆ ಸಂಪೂರ್ಣ ವರದಿಯನ್ನು ಪ್ರಚುರ ಪಡಿಸುವಂತೆ ಮತ್ತೊಮ್ಮೆ ತಿಳಿಸಿದರು ಅದರಂತೆ ಆರೋಗ್ಯ ವೈದ್ಯರು ಈ ಬಗ್ಗೆ ಕ್ರಮ ವಹಿಸುವುದಾಗಿ ತಿಳಿಸಿದರು.

3. <u>**ವಾರ್ಡಿನಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ:-**</u> ಅಧ್ಯಕ್ಷರು ಸಭೆಯಲ್ಲಿ ಹಾಜರಾಗಿದ್ದ ಸ್ಥಳೀಯರು ಮತ್ತು ಸದಸ್ಯರುಗಳು ವಾರ್ಡ್ ವ್ಯಾಪ್ತಿಯ ಹಲವು ಸ್ಥಳಗಳಲ್ಲಿ ಅಪರಿಚಿತರು ಅನಧಿಕೃತವಾಗಿ ಕಸ ಎಸೆಯುವುದನ್ನು ಹಾಗೂ ಡೆಬ್ರಿಸ್ ಹಾಕುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಒಮ್ಮತವಾಗಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವ ಬಗ್ಗೆ ಕೋರಿರುತ್ತಾರೆ. ಹಾಗೂ ವಾರ್ಡಿನಲ್ಲಿ ಎಲ್ಲೆಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಬೇಕು ಎಂಬ ಬಗ್ಗೆ ಪಟ್ಟಿಯನ್ನು ಸಹ ನೀಡುವುದಾಗಿ ತಿಳಿಸಿದರು. ಈ ಬಗ್ಗೆ ವಾರ್ಡಿನ ಕಿರಿಯ ಅಭಿಯಂತರರು ಪ್ರತಿಕ್ರಿಯಿಸಿ ಸಿ.ಸಿ. ಕ್ಯಾಮರಾ ಅಳವಡಿಸುವ ಕಾಮಗಾರಿಗೆ ಕಾರ್ಯಾದೇಶ ದೊರೆತಿದ್ದು, ಸ್ಥಳೀಯರು ಹಾಗೂ ಸದಸ್ಯರು ನೀಡುವ ಪಟ್ಟಿಯ ಅನುಸಾರ ಕ್ಯಾಮರಾ ಅಳವಡಿಸುವ ಕಾರ್ಯ ನಿರ್ವಹಿಸಲಾಗುವುದೆಂದು ತಿಳಿಸಿದರು. ಸಭೆಯಲ್ಲಿ ಹಾಜರಿದ್ದ ಡಾ॥ ಪ್ರಕಾಶ್‌ರವರು ಮಾತನಾಡಿ 7ನೇ ಮತ್ತು 8ನೇ ಮುಖ್ಯರಸ್ತೆಯ ಮೇಲ್ಸದರ ಹಾಳಾಗಿದ್ದು, ದುರಸ್ಥಿಗೊಳಿಸುವಂತೆ ಕೋರಿದರು. ಈ ಬಗ್ಗೆ ವಾರ್ಡಿನ ಕಿರಿಯ ಅಭಿಯಂತರರು ಮಾತನಾಡಿ ರಸ್ತೆ ಮತ್ತು ಮೂಲಭೌತ ಸೌಕರ್ಯ ವಿಭಾಗದ ವತಿಯಿಂದ ಕಾಮಗಾರಿ ಪ್ರಗತಿಯಲ್ಲಿರುವುದಾಗಿ ತಿಳಿಸಿರುತ್ತಾರೆ.

4. <u>**ವಾರ್ಡಿನ ರಸ್ತೆಗಳಲ್ಲಿ ಗುಂಡಿಗಳ ಬಗ್ಗೆ:-**</u> ಸಭೆಯಲ್ಲಿ ಹಾಜರಿದ್ದ ಸದಸ್ಯರಾದ ಡಾ॥ ಪ್ರಕಾಶ್‌ರವರು ಮನವಿ ಮಾಡಿರುವಂತೆ ಜಯನಗರ 2ನೇ ಬ್ಲಾಕ್‌ನ 7 ಮತ್ತು 8ನೇ ಅಡ್ಡರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚಲು ತಿಳಿಸಿದರ ಬಗ್ಗೆ ತೆಗೆದುಕೊಂಡ ಕ್ರಮದ ಬಗ್ಗೆ ಅಧ್ಯಕ್ಷರು ವಾರ್ಡಿನ ಅಭಿಯಂತರರನ್ನು ಪ್ರಶ್ನಿಸಿದರು. ಈ ವಿಚಾರವಾಗಿ ವಾರ್ಡಿನ ಅಭಿಯಂತರರು ಉತ್ತರಿಸಿ ಈಗಾಗಲೇ ಪಾಲಿಕೆಯ ಮಿಕ್ಸ್ ಪ್ಲಾಂಟ್ ಕಛೇರಿಗೆ ಇಂಡೆಂಟ್ ನೀಡಲಾಗಿದ್ದು, ರಸ್ತೆ ಗುಂಡಿ ಮುಚ್ಚುವ ಕಾರ್ಯ ಕೂಡಲೇ ನಿರ್ವಹಿಸಲಾಗುವುದೆಂದು ತಿಳಿಸಿದರು;

ಮು.ತಿ.ನೋ..



Scanned with CamScanner

## 5. ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ.

1. **ಬೆಸ್ಕಾಂ ವಿಭಾಗ**= ಸಭೆಯಲ್ಲಿ ಹಾಜರಿದ್ದ, ಸದಸ್ಯರಾದ ಶ್ರೀಮತಿ. ಪ್ರಮೀಳಾ ರವರು ಮಾತನಾಡಿ ಸೋಮೇಶ್ವರನಗರ 2ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಇಲ್ಲದಿರುವ ಬಗ್ಗೆ ತಿಳಿಸಿದರು. ಈ ಬಗ್ಗೆ ಪ್ರತಿಕ್ರಿಯಿಸಿದ ಬೆಸ್ಕಾಂ ಇಲಾಖೆಯ ಸಹಾಯಕ ಅಭಿಯಂತರರಾದ ಶ್ರೀ. ಮೂರ್ತಿ ರವರು ಕೂಡಲೇ ಈ ಬಗ್ಗೆ ಕ್ರಮ ವಹಿಸಿ ಬೀದಿ ದೀಪಗಳ ವ್ಯವಸ್ಥೆ ಕಲ್ಪಿಸಿಕೊಡುವುದಾಗಿ ತಿಳಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸಹಿ/ | ಸಹಿ/ 9/11/2020 |
| (ನರಸಿಂಹಯ್ಯ ಎಸ್.) | (ವರಲಕ್ಷ್ಮಿ) |
| ಕಾರ್ಯದರ್ಶಿ | ನೋಡಲ್ ಅಧಿಕಾರಿ |
| ವಾರ್ಡ್-153 ಜಯನಗರ | ವಾರ್ಡ್-153 ಜಯನಗರ |



Scanned with CamScanner